**All India Radio: Bangalore**
**National Bulletin In Kannada**
**01.06.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**01.06.2026 19.35 hrs**

---

ಮುಖ್ಯಾಂಶಗಳು

೧. ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರ ವಿಸ್ತರಣೆಗೆ ಭಾರತ-ಮ್ಯಾನ್ಮಾರ್ ಸಹಮತ; ಭದ್ರತೆ-ಗಡಿ ರಕ್ಷಣೆಯ ಮೇಲೆ ಹೆಚ್ಚಿನ ಗಮನ

೨. ೧೦ ರಾಜ್ಯಗಳ ೨೪ ರಾಜ್ಯಸಭಾ ಸ್ಥಾನಗಳ ದ್ವೈವಾರ್ಷಿಕ ಚುನಾವಣೆಗೆ ಅಧಿಸೂಚನೆ ಪ್ರಕಟ; ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭ

೩. ಎರಡನೇ ಭಾರತ-ಆಸ್ಟ್ರೇಲಿಯಾ ರಕ್ಷಣಾ ಸಚಿವರ ಸಂವಾದ; ಇಂಡೋ-ಪೆಸಿಫಿಕ್ ವಲಯದಲ್ಲಿ ಶಾಂತಿ-ಸ್ಥಿರತೆ ಕಾಯ್ದುಕೊಳ್ಳಲು ಒತ್ತು

೪. ಮಧ್ಯಪ್ರದೇಶದಲ್ಲಿ ಖೇತ್ ಬಚಾವೋ ಅಭಿಯಾನಕ್ಕೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಚಾಲನೆ

೫. ೨೨ನೇ ೨೦-ವರ್ಷದೊಳಗಿನ ಏಷ್ಯನ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್; ಭಾರತಕ್ಕೆ ೧೦ ಚಿನ್ನ ಸೇರಿದಂತೆ ಒಟ್ಟು ೧೯ ಪದಕ; ಪ್ರಧಾನಿ ಶ್ಲಾಘನೆ

---

ಭಾರತ ಮತ್ತು ಮ್ಯಾನ್ಮಾರ್ ದೇಶಗಳು ವ್ಯಾಪಾರ, ಹೂಡಿಕೆ, ಸಂಪರ್ಕ, ಭದ್ರತೆ ಹಾಗೂ ಗಡಿ ನಿರ್ವಹಣೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ವಿಸ್ತರಿಸಲು ನಿರ್ಧರಿಸಿವೆ.

ನವದೆಹಲಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಭಾರತ ಭೇಟಿಯಲ್ಲಿರುವ ಮ್ಯಾನ್ಮಾರ್ ಅಧ್ಯಕ್ಷ ಯು ಮಿನ್ ಆಂಗ್ ಲೇಂಗ್ ಅವರ ನಡುವೆ ಇಂದು ನಡೆದ ಉನ್ನತ ಮಟ್ಟದ ಮಾತುಕತೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.

ಈ ಸಂದರ್ಭದಲ್ಲಿ, ಮ್ಯಾನ್ಮಾರ್‌ನಲ್ಲಿ ಶಾಂತಿ ಮತ್ತು ಮಾತುಕತೆಯ ಪ್ರಕ್ರಿಯೆಗಳಿಗೆ ಭಾರತದ ಸಂಪೂರ್ಣ ಬೆಂಬಲ ಇರಲಿದ್ದು, ಒಕ್ಕೂಟ ಮಾದರಿಯ ಆಡಳಿತ ಮತ್ತು ಆರ್ಥಿಕ ಪ್ರಗತಿಯ ಅನುಭವಗಳನ್ನು ಹಂಚಿಕೊಳ್ಳಲು ಸಿದ್ಧವಿರುವುದಾಗಿ ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದ್ದಾರೆ. ಭಾರತದ 'ನೆರೆಹೊರೆ ಮೊದಲು' ಮತ್ತು 'ಆಕ್ಟ್ ಈಸ್ಟ್' ನೀತಿಗಳ ಅಡಿಯಲ್ಲಿ ಮ್ಯಾನ್ಮಾರ್ ವಿಶ್ವಾಸಾರ್ಹ ಪಾಲುದಾರ ದೇಶವಾಗಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಯು ಮಿನ್ ಆಂಗ್ ಲೇಂಗ್ ಅವರು ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದ್ದು, ಪ್ರವಾಸದ ಭಾಗವಾಗಿ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾದರು. ಮನ್ಮಾರ್ ಅಧ್ಯಕ್ಷರು ಉದ್ಯಮಿಗಳೊಂದಿಗೆ ಸಂವಾದ ನಡೆಸಲು ಮುಂಬೈಗೆ ಪ್ರಯಾಣಿಸಲಿದ್ದಾರೆ.

ಇದಕ್ಕೂ ಮುನ್ನ, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತು ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಅವರು ಮ್ಯಾನ್ಮಾರ್ ಅಧ್ಯಕ್ಷರೊಂದಿಗೆ ಪರಸ್ಪರ ಸಹಕಾರದ ಕುರಿತು ಸಕಾರಾತ್ಮಕ ಚರ್ಚೆ ನಡೆಸಿದ್ದರು.

ಸಭೆಯ ಕುರಿತು ಸುದ್ದಿಗೋಷ್ಠಿ ನಡೆಸಿ, ವಿವರ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಉಭಯ ದೇಶಗಳು ಆರ್ಥಿಕ ಹಾಗೂ ಇಂಧನ ವಲಯದಲ್ಲಿ ಸಹಕಾರ ವಿಸ್ತರಿಸಲು ಮತ್ತು ಪ್ರಮುಖ 'ಕಲಾದನ್ ಮಲ್ಟಿ ಮಾಡಲ್' ಸಾರಿಗೆ ಯೋಜನೆಯನ್ನು ಶೀಘ್ರವಾಗಿ ಪೂರ್ಣಗೊಳಿಸಲು ಸಮ್ಮತಿಸಿವೆ ಎಂದು ತಿಳಿಸಿದರು.

ಇದೇ ವೇಳೆ, ಭಾರತದ ಭದ್ರತೆಗೆ ಧಕ್ಕೆ ತರುವಂತಹ ಯಾವುದೇ ಚಟುವಟಿಕೆಗಳಿಗೆ ತನ್ನ ಭೂಪ್ರದೇಶವನ್ನು ಬಳಸಲು ಅನುಮತಿಸುವುದಿಲ್ಲ ಎಂದು ಮ್ಯಾನ್ಮಾರ್ ಭರವಸೆ ನೀಡಿದೆ. ಮ್ಯಾನ್ಮಾರ್‌ನಲ್ಲಿ ಮುಂದುವರಿದಿರುವ ಶಾಂತಿ ಪ್ರಕ್ರಿಯೆಯ ಭಾಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಅಲ್ಲಿನ ಮಾಜಿ ಸ್ಟೇಟ್ ಕೌನ್ಸಿಲರ್ ಆಂಗ್ ಸನ್ ಸೂಕಿ ಅವರ ವಿಷಯವನ್ನು ಪ್ರಸ್ತಾಪಿಸಿದ್ದು, ಎಲ್ಲರನ್ನೂ ಒಳಗೊಂಡ ಪ್ರಜಾಪ್ರಭುತ್ವ ಒಕ್ಕೂಟ ವ್ಯವಸ್ಥೆ ಹಾಗೂ ಶಾಂತಿ ಮಾತುಕತೆಯ ಮಹತ್ವವನ್ನು ಭಾರತ ಪುನರುಚ್ಚರಿಸಿದೆ ಎಂದು ವಿದೇಶಾಂಗ ಕಾರ್ಯದರ್ಶಿ ಸ್ಪಷ್ಟಪಡಿಸಿದ್ದಾರೆ.

---

ಹತ್ತು ರಾಜ್ಯಗಳಿಂದ ರಾಜ್ಯಸಭೆಯ ೨೪ ಸ್ಥಾನಗಳಿಗೆ ದ್ವೈವಾರ್ಷಿಕ ಚುನಾವಣೆಗೆ ಇಂದು ಅಧಿಸೂಚನೆ ಹೊರಡಿಸಲಾಗಿದ್ದು, ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದೆ.

ಇದೇ ೮ ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದ್ದು, ಇದೇ ೯ ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಇದೇ ೧೧ ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದ್ದು, ಇದೇ ೧೮ ರಂದು ಮತದಾನ ನಡೆಯಲಿದೆ. ಅದೇ ದಿನ ಮತ ಎಣಿಕೆ ನಡೆಯಲಿದೆ.

ಆಂಧ್ರಪ್ರದೇಶ, ಗುಜರಾತ್ ಮತ್ತು ಕರ್ನಾಟಕದಲ್ಲಿ ತಲಾ ನಾಲ್ಕು ಸ್ಥಾನಗಳು, ರಾಜಸ್ಥಾನ ಮತ್ತು ಮಧ್ಯಪ್ರದೇಶದಲ್ಲಿ ತಲಾ ಮೂರು ಸ್ಥಾನಗಳು, ಜಾರ್ಖಂಡ್‌ನಲ್ಲಿ ಎರಡು ಸ್ಥಾನಗಳು ಮತ್ತು ಮಣಿಪುರ, ಮೇಘಾಲಯ, ಅರುಣಾಚಲ ಪ್ರದೇಶ ಮತ್ತು ಮಿಜೋರಾಂನಲ್ಲಿ ತಲಾ ಒಂದು ಸ್ಥಾನಗಳಿಗೆ ಚುನಾವಣೆ ನಡೆಯಲಿದೆ.

ಮಾಜಿ ಪ್ರಧಾನಿ ಮತ್ತು ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡ, ಕೇಂದ್ರ ಸಚಿವ ಮತ್ತು ಬಿಜೆಪಿ ನಾಯಕರಾದ ಜಾರ್ಜ್ ಕುರಿಯನ್, ರಾಜ್ಯಸಭೆಯಲ್ಲಿ ವಿರೋಧ ಪಕ್ಷದ ನಾಯಕ ಮತ್ತು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಈ ತಿಂಗಳು ತಮ್ಮ ಅಧಿಕಾರ ಅವಧಿಯನ್ನು ಪೂರ್ಣಗೊಳಿಸುತ್ತಿರುವ ಸದಸ್ಯರಲ್ಲಿ ಸೇರಿದ್ದಾರೆ.

---

ಇಂಡೋ-ಪೆಸಿಫಿಕ್ ವಲಯದಲ್ಲಿ ಶಾಂತಿ ಮತ್ತು ಸ್ಥಿರತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಭಾರತ ಮತ್ತು ಆಸ್ಟ್ರೇಲಿಯಾ ದೇಶಗಳು ದ್ವಿಪಕ್ಷೀಯ ಕಡಲ ಭದ್ರತಾ ಸಹಕಾರವನ್ನು ಮತ್ತಷ್ಟು ವಿಸ್ತರಿಸಲು ಹಾಗೂ 'ಜಂಟಿ ಕಡಲ ಭದ್ರತಾ ಸಹಕಾರ ಮಾರ್ಗಸೂಚಿ'ಯನ್ನು ಶೀಘ್ರದಲ್ಲೇ ಅಂತಿಮಗೊಳಿಸಲು ನಿರ್ಧರಿಸಿವೆ. ನವದೆಹಲಿಯಲ್ಲಿ ಇಂದು ನಡೆದ 'ಎರಡನೇ ಭಾರತ-ಆಸ್ಟ್ರೇಲಿಯಾ ರಕ್ಷಣಾ ಸಚಿವರ ಸಂವಾದ'ದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಆಸ್ಟ್ರೇಲಿಯಾದ ರಕ್ಷಣಾ ಸಚಿವ ರಿಚರ್ಡ್ ಮಾರ್ಲೆಸ್ ಈ ಕುರಿತ ಮಹತ್ವದ ಒಪ್ಪಂದವನ್ನು ಮಾಡಿಕೊಂಡಿದ್ದಾರೆ.

ರಕ್ಷಣಾ ಉದ್ಯಮ ವಲಯದ ಪಾಲುದಾರಿಕೆಯನ್ನು ಬಲಪಡಿಸಲು 'ರಕ್ಷಣಾ ಸಾಮಗ್ರಿ ಮತ್ತು ಸೇವೆಗಳ ಪೂರೈಕೆ'ಗೆ ಸಂಬಂಧಿಸಿದ ತಿಳಿವಳಿಕೆ ಪತ್ರವನ್ನು ಸಿದ್ಧಪಡಿಸಲು ಉಭಯ ನಾಯಕರು ಸಮ್ಮತಿಸಿದ್ದಾರೆ. ಇದೇ ತಿಂಗಳ ಕೊನೆಯಲ್ಲಿ ಚೆನ್ನೈನಲ್ಲಿ ಜಂಟಿ ಶೋಧನೆ ಮತ್ತು ರಕ್ಷಣಾ ತರಬೇತಿ ಕವಾಯತು ನಡೆಯಲಿದ್ದು, ಇಂಡೋ-ಪೆಸಿಫಿಕ್ ವಲಯದಲ್ಲಿ ಮುಕ್ತ ವ್ಯಾಪಾರ ಮತ್ತು ಸಮುದ್ರಯಾನದ ಸ್ವಾತಂತ್ರ್ಯವನ್ನು ರಕ್ಷಿಸಲು 'ಕ್ವಾಡ್' ಒಕ್ಕೂಟದ ಕಡಲ ನಿಗಾ ಉಪಕ್ರಮಗಳನ್ನು ಹಾಗೂ ಜಂಟಿ ಸೇನಾ ಕವಾಯತುಗಳನ್ನು ಮತ್ತಷ್ಟು ತೀವ್ರಗೊಳಿಸಲು ಉಭಯ ದೇಶಗಳು ಬದ್ಧತೆ ವ್ಯಕ್ತಪಡಿಸಿವೆ.

---

ಮಧ್ಯಪ್ರದೇಶದ ರಾಯ್‌ಸೇನ್ ಜಿಲ್ಲೆಯ ರಾಮಸಿಯಾ ಗ್ರಾಮದಲ್ಲಿ ಇಂದು ದೇಶಾದ್ಯಂತ ಹಮ್ಮಿಕೊಳ್ಳಲಾಗಿರುವ 'ಖೇತ್ ಬಚಾವೋ ಅಭಿಯಾನ'ಕ್ಕೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಚಾಲನೆ ನೀಡಿದರು.

ಕೃಷಿ ಭೂಮಿ ಹಾಗೂ ಮಣ್ಣಿನ ಫಲವತ್ತತೆಯನ್ನು ರಕ್ಷಿಸುವ ಮತ್ತು ರೈತರಲ್ಲಿ ವೈಜ್ಞಾನಿಕ ಬೇಸಾಯ ಪದ್ಧತಿಯನ್ನು ಉತ್ತೇಜಿಸುವ ಉದ್ದೇಶ ಹೊಂದಿರುವ ಈ ಅಭಿಯಾನವು ಒಂದು ತಿಂಗಳ ಕಾಲ ಕಾರ್ಯನಿರ್ವಹಿಸಲಿದೆ. ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಮಣ್ಣಿನ ಆರೋಗ್ಯ ರಕ್ಷಣೆಗಾಗಿ ರೈತರು ರಾಸಾಯನಿಕ ಗೊಬ್ಬರಗಳ ಬಳಕೆಯನ್ನು ಕಡಿತಗೊಳಿಸಬೇಕು ಎಂದು ಕರೆ ನೀಡಿದರು.

ಈ ಅಭಿಯಾನದಲ್ಲಿ ಕೃಷಿ ವಿಶ್ವವಿದ್ಯಾಲಯಗಳು, ಐಸಿಎಆರ್ ಮತ್ತು ಕೃಷಿ ವಿಜ್ಞಾನ ಕೇಂದ್ರಗಳು ಸಕ್ರಿಯವಾಗಿ ಪಾಲ್ಗೊಳ್ಳಲಿದ್ದು, ರೈತರಿಗೆ ಮಣ್ಣು ಪರೀಕ್ಷೆ, ಮಣ್ಣಿನ ಆರೋಗ್ಯ ಕಾರ್ಡ್, ನೈಸರ್ಗಿಕ ಕೃಷಿ ಹಾಗೂ ನೀರು ಸಂರಕ್ಷಣಾ ತಂತ್ರಜ್ಞಾನಗಳ ಕುರಿತು ಜಾಗೃತಿ ಮೂಡಿಸಲಿವೆ. ಇದರೊಂದಿಗೆ, ನಕಲಿ ರಸಗೊಬ್ಬರ ಮತ್ತು ಬಿತ್ತನೆ ಬೀಜಗಳನ್ನು ಗುರುತಿಸುವ ವಿಧಾನ ಹಾಗೂ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ, ಬೆಳೆ ವಿಮೆ ಮತ್ತು ಕಿಸಾನ್ ಕ್ರೆಡಿಟ್ ಕಾರ್ಡ್‌ನಂತಹ ಪ್ರಮುಖ ಸರ್ಕಾರಿ ಯೋಜನೆಗಳ ಸೌಲಭ್ಯಗಳನ್ನು ರೈತರು ಸುಲಭವಾಗಿ ಪಡೆದುಕೊಳ್ಳಲು ಈ ಅಭಿಯಾನದ ಮೂಲಕ ನೆರವು ನೀಡಲಾಗುವುದು.

---

ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಅವರು ನವದೆಹಲಿಯಲ್ಲಿ ಇಂದು ಜಂಟಿಯಾಗಿ 'ನೀರು ಸಂಶೋಧನೆ ಮತ್ತು ಅಭಿವೃದ್ಧಿ' ಕುರಿತ ರಾಷ್ಟ್ರೀಯ ಕಾರ್ಯಾಗಾರವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಸಿ.ಆರ್. ಪಾಟೀಲ್, ನೀರಿನ ಅಭಾವಕ್ಕೆ ಸುಸ್ಥಿರ ಪರಿಹಾರಗಳನ್ನು ಕಂಡುಕೊಳ್ಳುವಲ್ಲಿ ಮತ್ತು '೨೦೪೭ರ ವಿಕಸಿತ ಭಾರತ'ದ ದೂರದೃಷ್ಟಿ ಸಾಕಾರಗೊಳಿಸುವಲ್ಲಿ ಅತ್ಯಾಧುನಿಕ ತಂತ್ರಜ್ಞಾನಗಳ ಅಳವಡಿಕೆ ಅತ್ಯಗತ್ಯ ಎಂದು ತಿಳಿಸಿದರು. ಇದೇ ವೇಳೆ, ಜಲಸಂಪನ್ಮೂಲಗಳ ಮೌಲ್ಯಮಾಪನ ಮತ್ತು ಸುಸ್ಥಿರ ನಿರ್ವಹಣೆಗಾಗಿ ಉಪಗ್ರಹ

ಆಧಾರಿತ ತಂತ್ರಜ್ಞಾನಗಳನ್ನು ಬಳಸಿಕೊಳ್ಳುವ ನಿಟ್ಟಿನಲ್ಲಿ ಜಲಶಕ್ತಿ ಸಚಿವಾಲಯ ಹಾಗೂ ಇಸ್ರೋ ನಡುವೆ ಮಹತ್ವದ ತಿಳಿವಳಿಕೆ ಪತ್ರಕ್ಕೆ ಸಹಿ ಹಾಕಲಾಯಿತು.

ದೇಶದ ಬಾಹ್ಯಾಕಾಶ ಆರ್ಥಿಕತೆಯು ಪ್ರಸ್ತುತ ೯ ಶತಕೋಟಿ ಡಾಲರ್‌ನಷ್ಟಿದ್ದು, ಶೀಘ್ರದಲ್ಲೇ ಹತ್ತು ಪಟ್ಟು ಪ್ರಗತಿ ಕಾಣಲಿದೆ ಎಂದು ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದರು.

ಇದೇ ಸಂದರ್ಭದಲ್ಲಿ ಸಚಿವರು, ಜಲಸಂಪನ್ಮೂಲ ನಿರ್ವಹಣೆ, ಕುಡಿಯುವ ನೀರು ಮತ್ತು ಹವಾಮಾನ ಸ್ಥಿತಿಸ್ಥಾಪಕತ್ವ ಸೇರಿದಂತೆ ವಿವಿಧ ಆದ್ಯತೆಯ ಕ್ಷೇತ್ರಗಳಲ್ಲಿ ಅತ್ಯಾಧುನಿಕ ಸಂಶೋಧನೆಗಳನ್ನು ಉತ್ತೇಜಿಸಲು ಜಲಶಕ್ತಿ ಸಚಿವಾಲಯ ಹಾಗೂ ಅನುಸಂಧಾನ ರಾಷ್ಟ್ರೀಯ ಸಂಶೋಧನಾ ಪ್ರತಿಷ್ಠಾನದ ಜಂಟಿ ಉಪಕ್ರಮವಾದ ಮಹಾ ಆನ್ ವಾಟರ್ ಎಂಬ ವಿಶೇಷ ಯೋಜನೆಯನ್ನು ಉದ್ಘಾಟಿಸಿದರು.

---

ಹಾಂಗ್‌ಕಾಂಗ್‌ನಲ್ಲಿ ನಡೆದ ೨೨ನೇ ೨೦ ವರ್ಷದೊಳಗಿನ ಏಷ್ಯನ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಭಾರತ ೧೦ ಚಿನ್ನ, ೫ ಬೆಳ್ಳಿ, ಕಂಚು ೪ ಪದಗಳು ಸೇರಿದಂತೆ ಒಟ್ಟು ೧೯ ಪದಕಗಳನ್ನು ಗೆಲ್ಲುವ ಮೂಲಕ ಪದಕ ಪಟ್ಟಿಯಲ್ಲಿ ಎರಡನೇ ಸ್ಥಾನ ಪಡೆದುಕೊಂಡಿದೆ. ವಿದೇಶದಲ್ಲಿ ನಡೆದ ಕಾಂಟಿನೆಂಟಲ್ ಟ್ರ್ಯಾಕ್ ಮತ್ತು ಫೀಲ್ಡ್ ಚಾಂಪಿಯನ್‌ಶಿಪ್‌ಗಳಲ್ಲಿ ಭಾರತ ಸಾಧಿಸಿದ ಅತ್ಯುತ್ತಮ ಪ್ರದರ್ಶನ ಇದಾಗಿದೆ.

ಪುರುಷರ ೮೦೦ ಮೀಟರ್ ಓಟದ ಸ್ಪರ್ಧೆಯಲ್ಲಿ ಮೊಗಲಿ ವೆಂಕಟರಾಮ್ ಚಿನ್ನದ ಪದಕ ಮುಡಿಗೇರಿಸಿಕೊಂಡರು. ಇದಕ್ಕೂ ಮುನ್ನ ಕಾಜಲ್, ಭಾವನಾ, ಆರತಿ ಮತ್ತು ನಿಪಮ್ ಅವರನ್ನೊಳಗೊಂಡ ಮಹಿಳೆಯರ ೪x೧೦೦ ಮೀಟರ್ ರಿಲೇ ತಂಡವು ಬೆಳ್ಳಿ ಪದಕವನ್ನು ತನ್ನದಾಗಿಸಿಕೊಂಡಿತು. ಈ ಮಹಿಳಾ ರಿಲೇ ತಂಡವು ೪೫.೦೫ ಸೆಕೆಂಡುಗಳಲ್ಲಿ ಗುರಿ ತಲುಪಿ ಹೊಸ ಜೂನಿಯರ್ ರಾಷ್ಟ್ರೀಯ ದಾಖಲೆಯನ್ನು ಬರೆಯಿತು.

ಭೂಮಿಕಾ, ತಹುರಾ, ಸೆಹನೂರ್ ಮತ್ತು ನೀರು ಅವರನ್ನೊಳಗೊಂಡ ಭಾರತದ ಮಹಿಳಾ ೪x೪೦೦ ಮೀಟರ್ ರಿಲೇ ತಂಡವೂ ಸಹ ಚಿನ್ನದ ಪದಕವನ್ನು ಭದ್ರಪಡಿಸಿಕೊಂಡಿತು. ಇನ್ನು ಪುರುಷರ ೪x೪೦೦ ಮೀಟರ್ ರಿಲೇ ಸ್ಪರ್ಧೆಯಲ್ಲಿ ಪಿಯೂಷ್ ರಾಜ್, ಸೈಯದ್ ಸಬೀರ್, ರಂಜಿತ್ ಕುಮಾರ್ ಎಸ್ ಮತ್ತು ಮೊಹಮ್ಮದ್ ಅಶ್ಫಾಕ್ ಅವರನ್ನೊಳಗೊಂಡ ತಂಡವು ಕಂಚಿನ ಪದಕವನ್ನು ಗೆದ್ದಿತು.

ಟೂರ್ನಿಯಲ್ಲಿ ತೋರಿದ ಅದ್ಭುತ ಪ್ರದರ್ಶನಕ್ಕಾಗಿ ಭಾರತೀಯ ಕ್ರೀಡಾಪಟುಗಳ ತಂಡವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಅಭಿನಂದಿಸಿದ್ದಾರೆ. ಈ ಅತ್ಯುತ್ತಮ ಪ್ರದರ್ಶನವು ಭಾರತದ ಯುವ ಅಥ್ಲೀಟ್‌ಗಳ ದೃಢಸಂಕಲ್ಪ ಮತ್ತು ಶ್ರೇಷ್ಠತೆಯನ್ನು ಪ್ರತಿಬಿಂಬಿಸುತ್ತದೆ" ಎಂದು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ಶ್ಲಾಘಿಸಿದ್ದಾರೆ.

ಕಳೆದ ತಿಂಗಳು ೨೮ ರಿಂದ ೩೧ ರವರೆಗೆ ನಡೆದ ಈ ಟೂರ್ನಿಯಲ್ಲಿ ೩೦ ಪುರುಷರು ಮತ್ತು ೧೮ ಮಹಿಳೆಯರು ಸೇರಿದಂತೆ ಒಟ್ಟು ೪೮ ಭಾರತೀಯ ಅಥ್ಲೀಟ್‌ಗಳು ಸ್ಪರ್ಧಿಸಿದ್ದರು. ಈ ಚಾಂಪಿಯನ್‌ಶಿಪ್ ಮುಂಬರುವ ಆಗಸ್ಟ್ ೫ ರಿಂದ ೯ ರವರೆಗೆ ಅಮೆರಿಕದ ಒರೆಗಾನ್‌ನ ಯುಜೀನ್‌ನಲ್ಲಿ ನಡೆಯಲಿರುವ ವಿಶ್ವ ೨೦ ವರ್ಷದೊಳಗಿನವರ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ಗೆ ಅರ್ಹತಾ ಪಂದ್ಯಾವಳಿಯಾಗಿದೆ.

---

ದೇಶಾದ್ಯಂತ ತೀವ್ರ ಸಂಚಲನ ಮೂಡಿಸಿರುವ ನೀಟ್-ಯುಜಿ ೨೦೨೪ರ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿತರಾಗಿರುವ ಮೂವರು ಪ್ರಮುಖ ಆರೋಪಿಗಳನ್ನು ನವದೆಹಲಿಯ ರೋಸ್ ಅವನ್ಯೂ ನ್ಯಾಯಾಲಯ ಇದೇ ೧೫ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

ಸಿಬಿಐ ತನಿಖೆ ನಡೆಸುತ್ತಿರುವ ಈ ಪ್ರಕರಣದಲ್ಲಿ ಮಹಾರಾಷ್ಟ್ರದ ಲಾತೂರ್ ಮೂಲದ ವೈದ್ಯ ಡಾ.ಮನೋಜ್ ಶಿರೂರೆ, ಪುಣೆಯ ಖಾಸಗಿ ತರಬೇತಿ ಸಂಸ್ಥೆಯ ಶಿಕ್ಷಕ ತೇಜಸ್ ಹರ್ಷದ್ ಕುಮಾರ್ ಮತ್ತು ಮನೀಶಾ ಸಂಜಯ್ ಹವಾಲ್ದಾರ್ ಅವರನ್ನು ಎರಡು ವಾರಗಳ ಕಾಲ ನ್ಯಾಯಾಂಗ ಬಂಧನದಲ್ಲಿರಿಸಲು ನ್ಯಾಯಾಲಯ ಆದೇಶಿಸಿದೆ.

__________ಮುಕ್ತಾಯ__________